ಕರ್ನಾಟಕ ಸರ್ಕಾರ

# ಜಿಲ್ಲಾ ಅಧಿಕಾರಿಗಳ ಕಛೇರಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಶಿವಮೊಗ್ಗ.

2ನೇ ಮಹಡಿ, ಜಿಲ್ಲಾ ಪಂಚಾಯತ್ ಕಟ್ಟಡ, ಕುವೆಂಪು ರಸ್ತೆ **E-mail-** domshimoga@gmail.com ☎ (08182) 220206

ಸಂ:ಅಸಂಕಇಶಿ/ವಿದ್ಯಾಸಿರಿ/ಸಿಆರ್-49/2021-22 ದಿನಾಂಕ:02/12/2021

## ಪ್ರಕಟಣೆ

2021-22 ನೇ ಸಾಲಿಗೆ "ವಿದ್ಯಾಸಿರಿ ಯೋಜನೆ"ಯಡಿ ಅಲ್ಪಸಂಖ್ಯಾತರ ಸಮುದಾಯ (ಮುಸ್ಲಿಂ, ಜೈನ್, ಕ್ರಿಶ್ಚಿಯನ್, ಭೌದ್ಧರು, ಸಿಖ್‌ರು ಹಾಗೂ ಪಾರ್ಸಿ) ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಸರ್ಕಾರಿ/ಖಾಸಗಿ ಅನುದಾನಿತ ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶ ಸಿಗದೇ ಇರುವ ವಿದ್ಯಾರ್ಥಿಗಳಿಗೆ ವಿದ್ಯಾಭ್ಯಾಸ ಮುಂದುವರೆಸಲು ಅನುಕೂಲವಾಗುವಂತೆ ಊಟ ಮತ್ತು ವಸತಿ ಸೌಲಭ್ಯಕ್ಕೆ ಸಹಾಯ ಒದಗಿಸಲು ಪ್ರತಿ ತಿಂಗಳಿಗೆ ರೂ.1500/- ರಂತೆ ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗಳಿಗೆ ಆನ್‌ಲೈನ್ ಮುಖಾಂತರ ಜಮಾ ಮಾಡಲು ಷರತ್ತಿಗೊಳಪಟ್ಟು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದ್ದು, ದಿನಾಂಕ:30-11-2021 ರಂದು ಕೊನೆ ದಿನಾಂಕವಾಗಿ ನಿಗದಿಪಡಿಸಲಾಗಿತ್ತು. ಅಲ್ಪಸಂಖ್ಯಾತರ ನಿರ್ದೇಶನಾಲಯದ ಆದೇಶದ ಮೇರೆಗೆ ಅರ್ಜಿ ಸಲ್ಲಿಸುವ ದಿನಾಂಕವನ್ನು 31-12-2021 ರವರೆಗೆ ವಿಸ್ತರಿಸಲಾಗಿದ್ದು, ಈಗಾಗಲೆ Offline ನಲ್ಲಿ ಅರ್ಜಿ ಸಲ್ಲಿಸಿರುವ ವಿದ್ಯಾರ್ಥಿಗಳನ್ನು ಹೊರತುಪಡಿಸಿ, ಉಳಿದ ವಿದ್ಯಾರ್ಥಿಗಳು ಕಡ್ಡಾಯವಾಗಿ ಸೇವಾಸಿಂಧುವಿನ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿ ಅಗತ್ಯ ದಾಖಲಾತಿಗಳೊಂದಿಗೆ ಹಾರ್ಡ ಪ್ರತಿಗಳನ್ನು ಶಿವಮೊಗ್ಗ, ಭದ್ರಾವತಿ, ತೀರ್ಥಹಳ್ಳಿ ತಾಲ್ಲೂಕಿನಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಶಿವಮೊಗ್ಗ ಉಪ ವಿಭಾಗ ವಿಸ್ತರಣಾಧಿಕಾರಿಗಳ ಕಛೇರಿಯಲ್ಲಿ ಸಲ್ಲಿಸಬಹುದಾಗಿದೆ ಹಾಗೂ ಶಿಕಾರಿಪುರ, ಸೊರಬ, ಸಾಗರ, ಹೊಸನಗರ ತಾಲ್ಲೂಕಿನಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಸಾಗರ ಉಪ ವಿಭಾಗದ ವಿಸ್ತರಣಾಧಿಕಾರಿಗಳ ಕಛೇರಿಯಲ್ಲಿ ಸಲ್ಲಿಸಬಹುದಾಗಿದೆ

ಹೆಚ್ಚಿನ ಮಾಹಿತಿಗಾಗಿ ಶಿವಮೊಗ್ಗ ಜಿಲ್ಲೆಯ ಅಲ್ಪಸಂಖ್ಯಾತರ ಕಛೇರಿ, 2ನೇ ಮಹಡಿ, ಜಿಲ್ಲಾ ಪಂಚಾಯತ್ ಕಟ್ಟಡ, ಕುವೆಂಪು ರಸ್ತೆ, ಶಿವಮೊಗ್ಗ (08182-220206) ಹಾಗೂ ತಾಲ್ಲೂಕು ವಿಸ್ತರಣಾಧಿಕಾರಿಗಳ ಕಛೇರಿ, 2ನೇ ಮಹಡಿ, ಹಳೇ ಡಿಸಿ ಕಛೇರಿ ಕಟ್ಟಡ ಶಿವಮೊಗ್ಗ (08182-276258) ಮತ್ತು ತಾಲೂಕು ವಿಸ್ತರಣಾಧಿಕಾರಿಗಳ ಕಛೇರಿ, ಎಸ್.ಎಲ್.ಎನ್ ನಗರ, ಇಂದಿರಗಾಂಧಿ ಕಾಲೇಜು ಎದುರು, ಸಾಗರ ಟೌನ್ (08183-295264) ಸಂಪರ್ಕಿಸಬಹುದಾಗಿದೆ.

### I. ಯೋಜನೆಯ ಉದ್ದೇಶ:

1. ಯಾವುದೇ ಇಲಾಖೆಯ ಸರ್ಕಾರಿ/ಸರ್ಕಾರಿ ಅನುದಾನಿತ ವಿದ್ಯಾರ್ಥಿ ನಿಲಯ /ವಸತಿ ಕಾಲೇಜುಗಳಲ್ಲಿ ಪ್ರವೇಶ ದೊರೆಯದೆ ಇರುವ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುವ ಅಲ್ಪಸಂಖ್ಯಾತರ (ಮುಸ್ಲಿಂ, ಜೈನ್, ಕ್ರಿಶ್ಚಿಯನ್, ಭೌದ್ಧರು, ಸಿಖ್‌ರು ಹಾಗೂ ಪಾರ್ಸಿ) ಸಮುದಾಯದ ಊಟ ಮತ್ತು ವಸತಿ ಸಹಾಯ ಒದಗಿಸುವುದು ಈ ಯೋಜನೆಯ ಉದ್ದೇಶ.
2. ವಿದ್ಯಾರ್ಥಿಗಳು (1), ವಿದ್ಯಾರ್ಥಿ ನಿಲಯಗಳಲ್ಲಿ ಪ್ರವೇಶ (2) "ವಿದ್ಯಾಸಿರಿ" ಊಟ ಮತ್ತು ವಸತಿ ಸಹಾಯ ಯೋಜನೆ ಇವುಗಳಲ್ಲಿ ಯಾವುದಾದರೂ ಒಂದು ಸೌಲಭ್ಯಕ್ಕೆ ಮಾತ್ರ ಅರ್ಹರಿರುತ್ತಾರೆ.

### II. ಅರ್ಹತೆ:

1. ಭಾರತದ ಪ್ರಜೆಯಾಗಿದ್ದು, ಕರ್ನಾಟಕದ ಖಾಯಂ ನಿವಾಸಿಯಾಗಿದ್ದು, ಶಿವಮೊಗ್ಗ ಜಿಲ್ಲೆಯಲ್ಲಿ ವ್ಯಾಸಂಗ ಮಾಡುತ್ತಿರಬೇಕು.
2. ಭಾರತ ಸರ್ಕಾರ ಅಥವಾ ರಾಜ್ಯ ಸರ್ಕಾರ ಅಧಿಸೂಚಿಸಿರುವ ಅಲ್ಪಸಂಖ್ಯಾತರ (ಮುಸ್ಲಿಂ, ಜೈನ್, ಕ್ರಿಶ್ಚಿಯನ್, ಭೌದ್ಧರು, ಸಿಖ್‌ರು ಹಾಗೂ ಪಾರ್ಸಿ) ಸಮುದಾಯಕ್ಕೆ ಸೇರಿರಬೇಕು.
3. ಕರ್ನಾಟಕ ಶಾಸನಬದ್ಧ ವಿಶ್ವವಿದ್ಯಾಲಯಗಳ ಆಧೀನಕ್ಕೆ ಒಳಪಡುವ ಸರ್ಕಾರಿ/ಸ್ಥಳೀಯ ಸಂಸ್ಥೆ/ಅನುದಾನಿತ ಸಂಸ್ಥೆಗಳು /ಮಾನ್ಯತೆ ಪಡೆದ ಅನುದಾನರಹಿತ ಖಾಸಗಿ ಸಂಸ್ಥೆಗಳಲ್ಲಿ ಮೆಟ್ರಿಕ್ ನಂತರ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಾಗಿರಬೇಕು.
4. ಈ ಮೇಲಿನ ಸೌಲಭ್ಯ ಪಡೆಯಲು ವಿದ್ಯಾರ್ಥಿಯ ತಂದೆ-ತಾಯಿ/ಪೋಷಕರು ಕುಟುಂಬದ ಒಟ್ಟು (**Gross Annual Income**) ವಾರ್ಷಿಕ ವರಮಾನವು ಅಲ್ಪಸಂಖ್ಯಾತರರಿಗೆ ರೂ.2.00 ಲಕ್ಷಗಳನ್ನು ನಿಗದಿಪಡಿಸಲಾಗಿದೆ.
5. ವಿದ್ಯಾರ್ಥಿಗಳು ಗ್ರಾಮೀಣ ಪ್ರದೇಶದವರಾಗಿರಬೇಕು ಹಾಗೂ ವ್ಯಾಸಂಗ ಮಾಡುವ ಕಾಲೇಜಿನಿಂದ ಕನಿಷ್ಠ 5 ಕಿ.ಮೀ ದೂರದವರಾಗಿರಬೇಕು. ಆದರೆ ವಿದ್ಯಾರ್ಥಿಯ ಸ್ವಂತ ಸ್ಥಳ, ನಗರ/ಪಟ್ಟಣ ಆಗಿದ್ದು, ಅವರು ಬೇರೆ ನಗರ/ಪಟ್ಟಣದಲ್ಲಿರುವ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿದ್ದಲ್ಲಿ, ಅಂತಹವನು ಈ ಸೌಲಭ್ಯಕ್ಕೆ ಅರ್ಹರಿರುತ್ತಾರೆ. (ಒಂದೇ ನಗರದ ವ್ಯಾಪ್ತಿಯಲ್ಲಿ ಇರುವವರು ಅರ್ಹರಿರುವುದಿಲ್ಲ).

6. ಈ ಯೋಜನೆಯಡಿ ಪ್ರಥಮ ಬಾರಿಗೆ ಸೌಲಭ್ಯವನ್ನು ಪಡೆಯಲು ಈ ಹಿಂದಿನ ವರ್ಷದ ವಾರ್ಷಿಕ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು.
7. ಈ ಯೋಜನೆಯಡಿ ಸಹಾಯಧನ ಆಯಾ ವರ್ಷಕ್ಕೆ ಲಭ್ಯವಿರುವ ಅನುದಾನ ಹಾಗೂ ಭೌತಿಕ ಗುರಿಗೆತಕ್ಕಂತೆ ಸ್ವೀಕೃತವಾದ ಅರ್ಹ ಅರ್ಜಿಗಳಲ್ಲಿ ಪಡೆದ ಅಂಕ/ ಕೋರ್ಸುಗಳ ಆಧಾರದ ಮೇಲೆ ಮಂಜೂರು ಮಾಡಲಾಗುವುದು.
8. ಮುಕ್ತ ವಿಶ್ವವಿದ್ಯಾಲಯ/ದೂರ ಶಿಕ್ಷಣ (**Correspondence Courses**) ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಈ ಸೌಲಭ್ಯ ಪಡೆಯಲು ಅರ್ಹರಿರುವುದಿಲ್ಲ.
9. ಸದರಿ ಯೋಜನೆಯಡಿ ತಪ್ಪು ಮಾಹಿತಿ ನೀಡಿ ಅಥವಾ ಸರ್ಕಾರಿ/ಖಾಸಗಿ (ಅನುದಾನಿತ) ವಸತಿ ನಿಲಯಗಳಲ್ಲಿ ಪ್ರವೇಶ ಪಡೆದಿರುವ ವಿದ್ಯಾರ್ಥಿಗಳು ಈ ಸೌಲಭ್ಯ ಪಡೆದಲ್ಲಿ ಕಾನೂನು ರೀತಿಯಲ್ಲಿ ಕ್ರಮ ಕೈಗೊಂಡು, ಪಡೆದಿರುವ ಎಲ್ಲಾ ಮೊತ್ತವನ್ನು ಬಡ್ಡಿ ಸಮೇತ ವಸೂಲಿ ಮಾಡಲಾಗುವುದು.

**ಷರತ್ತುಗಳು :**

1) ಅಲ್ಪಸಂಖ್ಯಾತರ ಮೆಟ್ರಿಕ್ ನಂತರದ ಬಾಲಕ/ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ ಖಾಲಿ ಇರುವ ಸ್ಥಾನಗಳಿಗೆ ವಿದ್ಯಾಸಿರಿಯಡಿಯಲ್ಲಿ ಸ್ವೀಕೃತವಾಗಿರುವ ಅರ್ಜಿಗಳನ್ನು ಪರಿಗಣಿಸಿ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿನಿಲಯಗಳಲ್ಲಿ ದಾಖಲಾತಿ ನೀಡಲಾಗುವುದು. ತಮ್ಮ ವ್ಯಾಪ್ತಿಯಲ್ಲಿ ಇರುವ ಎಲ್ಲಾ ವಿದ್ಯಾರ್ಥಿನಿಲಯಗಳು ಭರ್ತಿ ಆದ ನಂತರ ಆ ಅರ್ಜಿಗಳನ್ನು ವಿದ್ಯಾಸಿರಿ ಯೋಜನೆಯಡಿಯಲ್ಲಿ ಮಂಜೂರು ಮಾಡಲು ತಾಲ್ಲೂಕು ಅಲ್ಪಸಂಖ್ಯಾತರ ವಿಸ್ತರಣಾಧಿಕಾರಿಗಳು ನಿಯಮಾನುಸಾರ ಕ್ರಮಕೈಗೊಳ್ಳಲು ಸೂಚಿಸಿದೆ.
2) ವಿದ್ಯಾರ್ಥಿನಿಲಯಗಳಿಗೆ ಮಂಜೂರಾದ ಸಂಖ್ಯಾಬಲಕ್ಕೆ ತಕ್ಕಂತೆ ಅಲ್ಪಸಂಖ್ಯಾತರ ವಿದ್ಯಾರ್ಥಿಗಳನ್ನು ಭರ್ತಿ ಮಾಡಿ ನಂತರದ ಹೆಚ್ಚುವರಿ ಅರ್ಜಿಗಳನ್ನು ಮಾತ್ರ ವಿದ್ಯಾಸಿರಿ ಯೋಜನೆಯಡಿ ಪರಿಗಣಿಸಲು ತಾಲ್ಲೂಕು ಅಲ್ಪಸಂಖ್ಯಾತರ ವಿಸ್ತರಣಾಧಿಕಾರಿಗಳು ನಿಯಮಾನುಸಾರ ಕ್ರಮಕೈಗೊಳ್ಳಲು ಸೂಚಿಸಿದೆ.
3) 2021-22ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ವಿದ್ಯಾರ್ಥಿನಿಲಯದಲ್ಲಿ ಪ್ರವೇಶಕ್ಕಾಗಿ ಅರ್ಜಿಗಳನ್ನು ಸಲ್ಲಿಸಿ, ಸ್ಥಳವಕಾಶವಿಲ್ಲದೇ ಬಾಕಿ ಇರುವ ಅರ್ಜಿಗಳಿಗೆ ಮೊದಲು ಆದ್ಯತೆ ನೀಡಿ ಅನುದಾನ ಬಿಡುಗಡೆ ಮಾಡುವುದು, ತಾಲ್ಲೂಕು ಅಲ್ಪಸಂಖ್ಯಾತರ ವಿಸ್ತರಣಾಧಿಕಾರಿಗಳು ನಿಯಮಾನುಸಾರ ಕ್ರಮಕೈಗೊಳ್ಳಲು ಸೂಚಿಸಿದೆ.

**III. ಅರ್ಜಿ ಸಲ್ಲಿಸುವ ವಿಧಾನ:**

1) ಅರ್ಜಿಗಳನ್ನು ಸೇವಾ ಸಿಂಧುವಿನಲ್ಲಿ ಆನ್‌ಲೈನ್ ಮೂಲಕ ಸಲ್ಲಿಸುವುದು.
2) ಸ್ವೀಕೃತವಾದ ಅರ್ಜಿಯನ್ನು ಅಗತ್ಯ ದಾಖಲೆಗಳೊಂದಿಗೆ ತಾಲ್ಲೂಕು ಅಲ್ಪಸಂಖ್ಯಾತರ ಮಾಹಿತಿ ಕೇಂದ್ರಗಳಲ್ಲಿ ಸಲ್ಲಿಸಬಹುದಾಗಿದೆ.

ಸಹಿ/-
(ಧರ್ಮಪ್ಪ, ಟಿ)
ಜಿಲ್ಲಾ ಅಧಿಕಾರಿಗಳು
ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ
ಶಿವಮೊಗ್ಗ

**ಪ್ರತಿಯನ್ನು:-**

01. ಮಾನ್ಯ ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಸಲ್ಲಿಸಲಾಗಿದೆ.
02. ಮಾನ್ಯ ಜಿಲ್ಲಾ ವಾರ್ತಾಧಿಕಾರಿಗಳು, ವಾರ್ತಾ ಮತ್ತು ಪ್ರಚಾರ ಇಲಾಖೆ, ಶಿವಮೊಗ್ಗ ರವರ ಮಾಹಿತಿಗಾಗಿ ಹಾಗೂ ಈ ಪ್ರಕಟಣೆಯನ್ನು ಸ್ಥಳೀಯ ದಿನ ಪತ್ರಿಕೆಗಳಲ್ಲಿ ಉಚಿತವಾಗಿ ಪ್ರಕಟಣೆ ನೀಡಲು ಈ ಮೂಲಕ ಕೋರಿದೆ.
03. ಜಿಲ್ಲಾ ಅಧಿಕಾರಿಗಳು, ಜಿಲ್ಲಾ ವಕ್ಫ್ ಮಂಡಳಿ, ಶಿವಮೊಗ್ಗ ಇವರಿಗೆ ಮಾಹಿತಿಗಾಗಿ ಹಾಗೂ ಅಲ್ಪಸಂಖ್ಯಾತರ ಸಮುದಾಯದ ಅರ್ಹ ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆ ವಿದ್ಯಾರ್ಥಿವೇತನದ ಪ್ರಯೋಜನೆ ಪಡೆದುಕೊಳ್ಳಲು ಸೂಕ್ತ ತಿಳುವಳಿಕೆ ನೀಡಲು ಕೋರಲಾಗಿದೆ.
04. ತಾಲ್ಲೂಕು ಅಲ್ಪಸಂಖ್ಯಾತರ ವಿಸ್ತರಣಾಧಿಕಾರಿಗಳು, ಉಪ ವಿಭಾಗ, ಶಿವಮೊಗ್ಗ/ ಸಾಗರ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
05. ಕಛೇರಿ ಪ್ರತಿ.

(ಧರ್ಮಪ್ಪ.ಟಿ)
ಜಿಲ್ಲಾ ಅಧಿಕಾರಿಗಳು,
ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ,
ಶಿವಮೊಗ್ಗ